Akashvani : Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

18.06.2026 18.40 hrs

---

ಮುಖ್ಯಾಂಶಗಳು

- ವಿಧಾನ ಪರಿಷತ್ ಚುನಾವಣೆಯ ಮತ ಎಣಿಕೆ ಪ್ರಗತಿಯಲ್ಲಿ; ೨೨೨ ಮತಗಳ ಪೈಕಿ ಒಂದು ಮತ ಅಸಿಂಧು
- ಮೇಕೆದಾಟು ಯೋಜನೆ ಕುರಿತಂತೆ ತಮಿಳುನಾಡು ಸರ್ಕಾರದ ಜೊತೆ ಮಾತನಾಡಲು ಸಿದ್ಧ - ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ರಸ್ತೆ ಅಭಿವೃದ್ಧಿಗೆ ೨ ಸಾವಿರ ಕೋಟಿ ರೂಪಾಯಿ ವಿಶೇಷ ಅನುದಾನ
- ರಾಜ್ಯದ ಮಾವು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸುವಂತೆ ಕೇಂದ್ರ ಸರ್ಕಾರಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮನವಿ
- ಇದೇ ಶನಿವಾರ ಪಿಎಂ ಕಿಸಾನ್ ಸಮ್ಮಾನ್ ನಿಧಿಯ ೨೩ನೇ ಕಂತಿನ ಹಣ ಬಿಡುಗಡೆ

---

ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆದ ಚುನಾವಣೆಯ ಮತ ಎಣಿಕೆ ಪ್ರಗತಿಯಲ್ಲಿದೆ. ೨೨೨ ಶಾಸಕರ ಮತಗಳ ಪೈಕಿ ಒಂದು ಮತ ಅಸಿಂಧುವಾಗಿದೆ. ಕಾಂಗ್ರೆಸ್‌ನ ೧೩೫, ಬಿಜೆಪಿಯ ೬೨, ಜೆಡಿಎಸ್ ೧೮, ಪಕ್ಷೇತರರು ಎರಡು, ಸರ್ವೋದಯ ಪಕ್ಷ ೧, ಬಿಜೆಪಿ ಉಚ್ಚಾಟಿತ ಶಾಸಕರು ಮೂರು ಮತಗಳನ್ನು ಚಲಾಯಿಸಿದ್ದಾರೆ.

ವಿಧಾನಪರಿಷತ್ತಿನ ಏಳು ಸ್ಥಾನಗಳಿಗೆ ೮ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಕಾಂಗ್ರೆಸ್‌ನ ನಾಲ್ವರು ಹಾಗೂ ಬಿಜೆಪಿಯ ಇಬ್ಬರು ನಿರಾಯಾಸವಾಗಿ ಗೆಲುವು ಸಾಧಿಸಲಿದ್ದಾರೆ. ಒಂದು ಸ್ಥಾನಕ್ಕಾಗಿ ತೀವ್ರ ಪೈಪೋಟಿ ಏರ್ಪಟ್ಟಿದೆ. ಈ ಬಾರಿ ಶೇಕಡ ೧೦೦ರಷ್ಟು ಮತದಾನವಾಗಿದೆ.

---

ವಿಧಾನಪರಿಷತ್ ಚುನಾವಣೆಯಲ್ಲಿ ಉಚ್ಚಾಟಿತ ಬಿಜೆಪಿ ಶಾಸಕರಾದ ಎಸ್.ಟಿ. ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್, ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ಹಾಕಿರುವುದಾಗಿ ದೃಢಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ನಾಯಕರು ಸೌಜನ್ಯಕ್ಕಾಗಿ ಬೆಂಬಲ ಕೋರಿಲ್ಲ ಎಂದು ಆರೋಪಿಸಿದ್ದಾರೆ. ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಿಂದ ಕಾಂಗ್ರೆಸ್‌ಗೆ ಮತ ಹಾಕಿರುವುದಾಗಿ ಸ್ಪಷ್ಟಪಡಿಸಿದ್ದಾರೆ.

ಆತ್ಮಸಾಕ್ಷಿಗೆ ಅನುಗುಣವಾಗಿ ಕಾಂಗ್ರೆಸ್ ಪರವಾಗಿ ಮತ ಚಲಾಯಿಸಲಾಗಿದೆಯೇ ಹೊರತು ಬೇರೆ ಯಾವುದೇ ಬೇಡಿಕೆಗಳಿಲ್ಲ ಎಂದು ಹೇಳಿದ್ದಾರೆ.

---

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ವಾರ್ಡ್ ರಸ್ತೆಗಳನ್ನು ಸುಧಾರಿಸಿ ಅಭಿವೃದ್ಧಿಪಡಿಸಲು ಎರಡು ಸಾವಿರ ಕೋಟಿ ರೂಪಾಯಿ ವಿಶೇಷ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಘನತ್ಯಾಜ್ಯ ನಿರ್ವಹಣೆ ಕುರಿತು ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಟ್ಟು ಹೋಗಿರುವ ವಾರ್ಡ್ ರಸ್ತೆಗಳನ್ನು ಗುರುತಿಸಿ, ಅಲ್ಪಾವಧಿಯ ಟೆಂಡರ್ ಕರೆದು, ಕಾಮಗಾರಿ ಪ್ರಾರಂಭಿಸಲು ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಐದು ನಗರ ಪಾಲಿಕೆಗಳ ಆಯುಕ್ತರು, ಹದಗೆಟ್ಟಿರುವ ರಸ್ತೆಗಳನ್ನು ಪಟ್ಟಿ ಮಾಡಬೇಕು, ಶೀಘ್ರವೇ ಕಾಮಗಾರಿಗಳನ್ನು ಆರಂಭಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

---

ರಾಜ್ಯದ ಮಾವು ಬೆಳೆಗಾರರ ಹಿತರಕ್ಷಣೆಗಾಗಿ ಈ ವರ್ಷವೂ ಬೆಲೆ ಕೊರತೆ ಪಾವತಿ ಯೋಜನೆ ಮೂಲಕ ನೆರವಾಗುವಂತೆ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಕೇಂದ್ರ ಕೃಷಿ ಸಚಿವರನ್ನು ಒತ್ತಾಯಿಸಿದ್ದಾರೆ.

ರಾಜ್ಯದ ಮಾವು ಬೆಳೆಗಾರರ ಬವಣೆ, ಸಂಕಷ್ಟ ಕುರಿತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ  ಪತ್ರ ಬರೆದಿರುವ ಸಚಿವರು, ಸಮಸ್ಯೆಗಳಿಗೆ ಶೀಘ್ರವೇ ಸ್ಪಂದಿಸುವಂತೆ ಮನವಿ ಮಾಡಿದ್ದಾರೆ.

ಕರ್ನಾಟಕದಲ್ಲಿ ಹವಾಮಾನ ವೈಪರೀತ್ಯ ಮತ್ತು ಮಾರುಕಟ್ಟೆಯಲ್ಲಿ ಬೆಲೆ ಕುಸಿತದಿಂದ ಮಾವು ಬೆಳೆಗಾರರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಕೂಡಲೇ 'ಬೆಲೆ ಕೊರತೆ ಪಾವತಿ ಯೋಜನೆ ಅಡಿ ನೆರವಾಗುವಂತೆ ಕೃಷಿ ಸಚಿವರನ್ನು ಒತ್ತಾಯಿಸಿದ್ದಾರೆ.

---

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೨೩ನೇ ಕಂತಿನ ಹಣವನ್ನು ಪ್ರಧಾನಿ ನರೇಂದ್ರ ಮೋದಿ ಇದೇ ಶನಿವಾರ ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯ ತಾರಕೇಶ್ವರ್‌ನಲ್ಲಿ ಬಿಡುಗಡೆ ಮಾಡಲಿದ್ದಾರೆ.

ದೇಶಾದ್ಯಂತ ೯ ಕೋಟಿ ೪೪ ಲಕ್ಷಕ್ಕೂ ಹೆಚ್ಚು ರೈತರ ಬ್ಯಾಂಕ್ ಖಾತೆಗಳಿಗೆ ೧೮ ಸಾವಿರದ ೮೮೦ ಕೋಟಿ ರೂಪಾಯಿಗಳು ನೇರವಾಗಿ ವರ್ಗಾವಣೆಯಾಗಲಿದೆ ಎಂದು ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ತಿಳಿಸಿದೆ.

೨ ಕೋಟಿ ೧೮ ಲಕ್ಷಕ್ಕೂ ಹೆಚ್ಚು ಮಹಿಳಾ ರೈತರು ಈ ಕಂತಿನ ಪ್ರಯೋಜನ ಪಡೆಯಲಿದ್ದಾರೆ. ಸುಮಾರು ಒಂದು ಕೋಟಿಗೂ ಹೆಚ್ಚು ರೈತರು ಅಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಅವರು, ನವದೆಹಲಿಯಲ್ಲಿ ನಾಳೆ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ವಿಕಸಿತ ಭಾರತ ರೋಜ್‌ಗಾರ್ ಯೋಜನೆಯಡಿ ಫಲಾನುಭವಿಗಳಿಗೆ ೨ ಸಾವಿರದ ೪೦೦ ಕೋಟಿ ರೂಪಾಯಿ ಪ್ರೋತ್ಸಾಹ ಧನ ವಿತರಿಸಲಿದ್ದಾರೆ.

ರಾಜ್ಯದ ಬೆಂಗಳೂರಿನ ವಿವಿಧೆಡೆ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಚಿತ್ರದುರ್ಗ, ಬಳ್ಳಾರಿ, ಕಲಬುರಗಿ, ಹುಬ್ಬಳ್ಳಿ, ಬೆಳಗಾವಿ, ಮೈಸೂರು, ರಾಯಚೂರು, ಶಿವಮೊಗ್ಗ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಕಾರ್ಯಕ್ರಮ ನಡೆಯಲಿದೆ.

ಈ ಯೋಜನೆಯು ಮೊದಲ ಬಾರಿಗೆ ಉದ್ಯೋಗಿಗಳಿಗೆ ೧೫ ಸಾವಿರ ರೂಪಾಯಿವರೆಗೆ ಮತ್ತು ಪ್ರತಿ ಹೆಚ್ಚುವರಿ ನೇಮಕಾತಿಗೆ ಉದ್ಯೋಗದಾತರಿಗೆ ತಿಂಗಳಿಗೆ ೩ ಸಾವಿರ ರೂಪಾಯಿವರೆಗೆ ಪ್ರೋತ್ಸಾಹ ಧನ ನೀಡಲಿದೆ. ಇದು ಔಪಚಾರಿಕ ಉದ್ಯೋಗವನ್ನು ಪ್ರೋತ್ಸಾಹಿಸುವುದರ ಜೊತೆಗೆ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲಿದೆ.

---

ಕರ್ತವ್ಯ ಯೋಜನೆಯಡಿ ಉದ್ಯೋಗಿಗಳ ನೋಂದಣಿ ಪ್ರಕ್ರಿಯೆಯು ಅತ್ಯಂತ ವೇಗವಾಗಿ ನಡೆಯುತ್ತಿದ್ದು, ಈಗಾಗಲೇ ಶೇಕಡ ೭೦.೬ಕ್ಕಿಂತ ಹೆಚ್ಚು ನೌಕರರು ಯಶಸ್ವಿಯಾಗಿ ನೋಂದಾಯಿಸಿಕೊಂಡಿದ್ದಾರೆ ಎಂದು ರಾಜ್ಯ ಸರ್ಕಾರ ಸ್ಪಷ್ಟಪಡಿಸಿದೆ.

ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ ದತ್ತಾಂಶದ ಪ್ರಕಾರ ಒಟ್ಟು ೪೩ ಪ್ರಮುಖ ಇಲಾಖೆಗಳು ಹಾಗೂ ೧೩೭ ಸರಣಿ ಇಲಾಖೆಗಳು ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ನಾಲ್ಕು ಲಕ್ಷದ

೭೮ ಸಾವಿರದ ೧೮೮೧ ನೌಕರರ ಪೈಕಿ ೩ ಲಕ್ಷದ ೩೭ ಸಾವಿರದ ೭೪೪೮ ನೌಕರರು ಈಗಾಗಲೇ ಆಪ್‌ನಲ್ಲಿ ಯಶಸ್ವಿಯಾಗಿ ನೋಂದಾಯಿಸಿಕೊಂಡಿದ್ದಾರೆ ಎಂದು ತಿಳಿಸಿದೆ.

ಕರ್ತವ್ಯ ತಂತ್ರಾಂಶವು ಸರ್ಕಾರಿ ನೌಕರರ ಹಾಜರಾತಿಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ತರಲು ರೂಪಿಸಲಾದ ಕ್ರಾಂತಿಕಾರಿ ಹೆಜ್ಜೆಯಾಗಿದೆ ಎಂದು ಸರ್ಕಾರ ಪುನರುಚ್ಚರಿಸಿದೆ.

---

ಜಲ ಸಂಪನ್ಮೂಲ ಸಚಿವ ರಾಮಲಿಂಗಾ ರೆಡ್ಡಿ ಇಂದು ಕೊಪ್ಪಳ ಜಿಲ್ಲೆಗೆ ಆಗಮಿಸಿ, ತುಂಗಭದ್ರಾ ಜಲಾಶಯಕ್ಕೆ ಹೊಸದಾಗಿ ಅಳವಡಿಸಿದ ಕ್ರಸ್ಟ್ ಗೇಟ್‌ಗಳ ಉದ್ಘಾಟನಾ ಕಾರ್ಯಕ್ರಮದ ಸ್ಥಳ ಪರಿಶೀಲಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಗೇಟ್‌ಗಳನ್ನು ಬದಲಾಯಿಸುವ ಕಾಮಗಾರಿ ಪೂರ್ಣಗೊಂಡಿದ್ದು, ಇದಕ್ಕಾಗಿ ೫೧ ಕೋಟಿ ರೂಪಾಯಿ ಖರ್ಚಾಗಿದೆ. ಈ ಗೇಟ್‌ಗಳು ೫೫ ರಿಂದ ೬೦ ವರ್ಷಗಳವರೆಗೆ ಬಾಳಿಕೆ ಬರಲಿವೆ ಎಂದು ತಿಳಿಸಿದರು.

ನೂತನ ಗೇಟ್‌ಗಳ ಲೋಕಾರ್ಪಣೆ ಸಮಾರಂಭಕ್ಕೆ ಕೇಂದ್ರ ಜಲಸಂಪನ್ಮೂಲ ಸಚಿವರು, ತೆಲಂಗಾಣ ಮತ್ತು ಆಂದ್ರ ರಾಜ್ಯಗಳ ಮುಖ್ಯಮಂತ್ರಿಗಳು, ಸಚಿವರು, ಶಾಸಕರು ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

---

ಶಾಸನಬದ್ಧ ನಿಯಮಗಳನ್ನು ಅಳವಡಿಸಿಕೊಂಡು ಕನ್ನಡ ಚಿತ್ರರಂಗದ ಬೆಳವಣಿಗೆಗೆ ಪ್ರಯತ್ನಿಸಬೇಕು ಎಂದು ಹಿರಿಯ ಚಿತ್ರ ನಿರ್ದೇಶಕ ಟಿ.ಎಸ್.ನಾಗಾಭರಣ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ಚಿತ್ರೋದ್ಯಮಿಗಳೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೂಕರು ಹಾಗೂ ಕಿವುಡರಿಗೆ ಅನೇಕ ಸೌಕರ್ಯಗಳನ್ನು ಸಿನೆಮಾ ಹಾಗೂ ಸಿನೆಮಾ ಮಂದಿರಗಳು ಅಳವಡಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

---

ಸಂಕ್ಷಿಪ್ತ ಸುದ್ದಿ

- ರೋಗಿಗಳ ಆರೋಗ್ಯದ ತುರ್ತು ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು ಎಲ್ಲಾ ವೈದ್ಯಕೀಯ ವರದಿಗಳನ್ನು ವಿಳಂಬವಿಲ್ಲದೆ ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಮಂಡ್ಯ

ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

- ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ಸಮೀಪದ ದಾಸನಪುರದಲ್ಲಿ ವೈದ್ಯರ ಸಲಹೆ ಇಲ್ಲದೆ ಔಷಧಿ ಮಾರಾಟ ಮಾಡುತ್ತಿದ್ದ ಖಾಸಗಿ ಮೆಡಿಕಲ್ ಶಾಪ್ ಪರವಾನಗಿ ರದ್ದುಪಡಿಸಲಾಗಿದೆ ಎಂದು ಸಹಾಯಕ ಔಷಧ ನಿಯಂತ್ರಕರು ತಿಳಿಸಿದ್ದಾರೆ.

__________ ಮುಕ್ತಾಯ _________